## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** **ಶ್ರೀ. ಮಧು, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಲಕ್ಕೇನಹಳ್ಳಿ ಗ್ರಾಮ ಪಂಚಾಯಿತಿ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ. ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.**

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ D.O.No. Compt/UPLOK/BD/4397/2015/ARLO-1, ದಿನಾಂಕ: 24.03.2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 27.02.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

1. ಬೆಂಗಳೂರು ನಗರ ಕಾಮಾಕ್ಷಿಪಾಳ್ಯ ಮಾರುತಿ ನಗರ 1ನೇ ಎ ಕ್ರಾಸ್‌ನ ನಂ. 12 ರ ನಿವಾಸಿಯಾದ ಶ್ರೀ. ತಿರುಮಲಯ್ಯ ಬಿನ್ ತಿಮ್ಮರಾಯಪ್ಪ ತಮ್ಮ ದೂರಿನಲ್ಲಿ ತುಮಕೂರು ಜಿಲ್ಲೆ ಮತ್ತು ತಾಲ್ಲೂಕು ಲಕ್ಕೇನಹಳ್ಳಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾದ ಶ್ರೀ. ಮಧು ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ :–**

ತುಮಕೂರು ಜಿಲ್ಲೆ ಮತ್ತು ತಾಲ್ಲೂಕು ಲಕ್ಕೇನಹಳ್ಳಿ ಗ್ರಾಮದ ಸೈಟ್ ನಂ. 9 ರ ಸರ್ವೆ ಸ್ಕೆಚ್ ಕೋರಿ ಎದುರುದಾರರಿಗೆ ಅರ್ಜಿ ಸಲ್ಲಿಸಿದ್ದು, ಎದುರುದಾರರು ಸರ್ವೆ ಸ್ಕೆಚ್ ತಯಾರಿಸಲು ಹಣದ ಬೇಡಿಕೆ ಇಟ್ಟು ಕೆಲಸ ಮಾಡಿಕೊಟ್ಟಿಲ್ಲ. ಈ ಸಂಬಂಧವಾಗಿ ದೂರುದಾರರು ಜಿಲ್ಲಾಧಿಕಾರಿಗಳು, ತಹಶೀಲ್ದಾರ್ ಮತ್ತು ಎಡಿಎಲ್‌ಆರ್ ರವರ ಬಳಿ ದೂರು ನೀಡಿದರೂ ಸಹ ಎದುರುದಾರರ ವಿರುದ್ದ ಯಾವುದೇ ಕ್ರಮ ಕೈಗೊಂಡಿಲ್ಲವೆಂದು ಹೇಳಿದ್ದಾರೆ.

3. **ದೂರಿಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ, ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ –**

ಸದರಿ ಸ್ವತ್ತಿಗೆ ಸಂಬಂಧಪಟ್ಟಂತೆ ಸರ್ವೆ ಸ್ಕಚ್‌ಗಾಗಿ ಅರ್ಜಿ ಸಲ್ಲಿಸಿದ್ದು, ಅದರ ಜೊತೆ 1963 ನೇ ಇಸವಿಯ ಕ್ರಯ ಪತ್ರ ನಮೂನೆ 15ನ್ನು ಹಾಜರುಪಡಿಸಿದ್ದಾರೆ. ಆದರೆ, ದೂರುದಾರರು ಸಲ್ಲಿಸಿರುವ ಸ್ವತ್ತಿಗೂ ಕ್ರಯ ಪತ್ರಕ್ಕೂ ತಾಳೆಯಿಲ್ಲ. ದೂರುದಾರರು ಕೇಳಿರುವ ಸರ್ವೆ ಸ್ಕೆಚ್ ಮಾಡುವುದು ಗ್ರಾಮ ಪಂಚಾಯತಿ ವ್ಯಾಪ್ತಿಗೆ ಬರುವುದಿಲ್ಲ. ಈ ಬಗ್ಗೆ ತಹಶೀಲ್ದಾರ್, ತುಮಕೂರು ರವರಿಗೆ ಅರ್ಜಿ ಬರೆಯಲಾಗಿದೆ. ಸದರಿ ಸ್ವತ್ತಿಗೆ ಸಂಬಂಧಪಟ್ಟಂತೆ ಪರ್ಯಾವೀಕ್ಷಕರು ಸ್ಥಳಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಬಾಜುದಾರರು ತಕರಾರು ಮಾಡಿದ್ದಾರೆ. 1988–89 ನೇ ಸಾಲಿನ ಕರ ನಿರ್ಧರಣಾ ಪಟ್ಟಿ ಮತ್ತು ಸದರಿ ಸ್ವತ್ತಿನ ಚಕ್ಕುಬಂದಿಯನ್ನು ಪರಿಶೀಲಿಸಲಾಗಿ ಒಂದಕ್ಕೊಂದು ತಾಳೆಯಲ್ಲ. ಈ ಬಗ್ಗೆ ದೂರುದಾರರಿಗೆ ಹಿಂಬರಹ ನೀಡಲಾಗಿದೆಯೆಂದು ಹೇಳಿದ್ದಾರೆ.

**4. ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:-**

ನಿವೇಶನ ಸಂಖ್ಯೆ:9 ರ ಸ್ವತ್ತು ಮೂಲತಃ ದೂರುದಾರರ ತಂದೆಗೆ ಸಂಬಂಧಪಟ್ಟ ಆಸ್ತಿಯಾಗಿದೆ. ಸದರಿ ಸ್ವತ್ತನ್ನು ದೂರುದಾರರ ತಂದೆ ಕ್ರಯಕ್ಕೆ ಪಡೆದಿದ್ದಾರೆ. ಈ ಬಗ್ಗೆ ಎದರುದುರಾರರ ಕಛೇರಿಯಲ್ಲಿ ತೆರಿಗೆ ನಿರ್ಧರಣಾ ಪಟ್ಟಿಯನ್ನು ಸಹ ವಿತರಣೆ ಮಾಡಲಾಗಿದೆ. ಸದರಿ ಸ್ವತ್ತಿಗೆ ಸಂಬಂಧಪಟ್ಟಂತೆ 1978-79 ನೇ ಸಾಲಿನಿಂದಲೂ ಸಹ ತೆರಿಗೆ ನಿರ್ಧರಣಾ ಪಟ್ಟಿಯಲ್ಲಿ ದೂರುದಾರರ ಹೆಸರು ನಮೂದಾಗಿದೆ. ಸದರಿ ಸ್ವತ್ತಿಗೆ ಸಂಬಂಧಪಟ್ಟಂತೆ ತೆರಿಗೆ ನಿರ್ಧರಣಾ ಪಟ್ಟಿಯಲ್ಲಿ ಚಕ್ಕುಬಂದಿಯನ್ನು ಸಹಾ ನಮೂದಿಸಲಾಗಿದೆ. ಸದರಿ ಸ್ವತ್ತು ಎದುರುದಾರರ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುತ್ತಿದ್ದು, ಅದಕ್ಕೆ ಸಂಬಂಧಪಟ್ಟ ಎಲ್ಲಾ ದಾಖಲೆಗಳು ಎದುರುದಾರರ ಕಛೇರಿಯಲ್ಲಿ ಲಭ್ಯವಿದೆ. ಸದರಿ ಸ್ವತ್ತು ಗ್ರಾಮ ಠಾಣಾ ವ್ಯಾಪ್ತಿಗೆ ಸಂಬಂಧಪಟ್ಟಿರುವುದರಿಂದ, ಅದಕ್ಕೆ ಸಂಬಂಧಪಟ್ಟ ಎಲ್ಲಾ ದಾಖಲೆಗಳನ್ನು ನೀಡುವುದು ಎದುರುದಾರರ ಕಾರ್ಯವ್ಯಾಪ್ತಿಗೆ ಒಳಪಟ್ಟಿದೆ. ಆದರೆ, ಎದುರುದಾರರು ಸ್ಥಳಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಸ್ವತ್ತಿನ ಬಾಜುದಾರರು ತಂಟೆ ತಕರಾರು ಮಾಡಿರುವುದಾಗಿ ಹೇಳಿದ್ದಾರೆ. ಆದರೆ, ಈ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಸದರಿ ಸ್ವತ್ತಿಗೆ ಸಂಬಂಧಪಟ್ಟಂತೆ ಸರ್ವೆ ಸ್ಕೆಚ್ ನೀಡುವ ಅಧಿಕಾರ ಎದುರುದಾರರಿಗೆ ಇದ್ದರೂ ಸಹಾ ಅನಾವಶ್ಯಕವಾಗಿ ದೂರುದಾರರಿಗೆ ತೊಂದರೆ ನೀಡಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

**6.** ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು, ದಾಖಲಾತಿಗಳನ್ನು ಹಾಗೂ ಎದುರುದಾರರ ಆಕ್ಷೇಪಣೆಯನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ ಸಮಂಜಸ / ಸಮಾಧಾನಕರ ಕಾರಣ ಇಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

**7.** ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಮಡ ದುರ್ವರ್ತನೆ/ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

ಈ ಹಿನ್ನೆಲೆಯಲ್ಲಿ ಶ್ರೀ. ಮಧು, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಲಕ್ಕೇನಹಳ್ಳಿ ಗ್ರಾಮ ಪಂಚಾಯಿತಿ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ. ಇವರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ ನಿಯಮ 3(1)ರ ಅಡಿಯಲ್ಲಿ ದರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ನಿಯಮ 14 (ಎ) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/278/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 22-04-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ. ಮಧು, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಲಕ್ಕೇನಹಳ್ಳಿ ಗ್ರಾಮ ಪಂಚಾಯಿತಿ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ. ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳು ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 56 ರವರೆಗಿನ ಮೂಲ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ.
6. ಶ್ರೀ. ಮಧು, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಲಕ್ಕೇನಹಳ್ಳಿ ಗ್ರಾಮ ಪಂಚಾಯಿತಿ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ.
7. ಗಣಕಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.